# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಶಿಶಿಲ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಪಿಲಾ ನದಿಗೆ ಅಡ್ಡಲಾಗಿ ಸೇತುವೆ ಮತ್ತು ಕಿಂಡಿ ಆಣೆಕಟ್ಟೆಗೆ ಹಲಗೆಗಳನ್ನು ಅಳವಡಿಸದೇ ಕರ್ತವ್ಯಲೋಪವೆಸಗಿರುವ ಅಧಿಕಾರಿ/ನೌಕರರ ವಿರುದ್ಧದ ಇಲಾಖಾ ವಿಚಾರಣೆ- ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯವರ ನೇಮಕ ಮಾಡುವ ಬಗ್ಗೆ ಆದೇಶ

ಓದಲಾಗಿದೆ:

1. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ ಮತ್ತು ನೈ ಇಲಾಖೆ ರವರ ಕಚೇರಿಯ ಪತ್ರ ಸಂಖ್ಯೆ:ಮುಇಂ /ಗ್ರಾಕುನೀ&ನೈಇ/ ಸಇಂ-3/310/2018-19, ದಿನಾಂಕ:06.10.2018
2. ಸರ್ಕಾರದ ಕಾರಣ ಕೇಳುವ ನೋಟಿಸ್ ದಿನಾಂಕ:28.05.2019
3. ಆಪಾದಿತರಾದ ಶ್ರೀ ಸಿ.ಆರ್.ನರೇಂದ್ರ, ಹಿಂದಿನ ಸ.ಕಾ.ಇಂ. ಇವರ ಲಿಖಿತ ಹೇಳಿಕೆ ದಿನಾಂಕ:30.08.2019 ಹಾಗೂ ಕೆ.ಎಸ್.ತಿಪ್ಪೇಸ್ವಾಮಿ ಸ.ಇಂ. ರವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ:13.09.2019

## ಪ್ರಸ್ತಾವನೆ:

ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ 2012-13ನೇ ಸಾಲಿನ NRDWP ಯೋಜನೆಯ (Sustainability) ಕಾರ್ಯಕ್ರಮದಡಿ ಕಪಿಲಾ ನದಿಗೆ ಅಡ್ಡಲಾಗಿ ಸೇತುವೆ ಹಾಗೂ ಕಿಂಡಿ ಆಣೆಕಟ್ಟೆ ನಿರ್ಮಾಣ ಕಾಮಗಾರಿಯಲ್ಲಿ ಹಲಗೆಗಳನ್ನು ನಿರ್ಮಾಣ ಮಾಡಲು ಅವಕಾಶ ಕಲ್ಪಿಸದೇ ಇರುವುದರಿಂದ ಸದರಿ ಕಾಮಗಾರಿಯ ನಿರಂತರತೆಯ ಉದ್ದೇಶವು ವಿಫಲಗೊಳಿಸಿರುವ ಈ ಕೆಳಕಂಡ ಮೂರು ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಆಪಾದಿತರ ಮೇಲಿನ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ಕಂಡುಬಂದಿರುತ್ತದೆ. ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಎಸ್.ಎಲ್.ಸತ್ಯನಾರಾಯಣ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರು ದಿನಾಂಕ:31.08.2017ರಂದು ಸೇವೆಯಿಂದ ನಿವೃತ್ತಿ ಹೊಂದಿದ್ದು. ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ನಿಯಮಗಳಲ್ಲಿ ಅವಕಾಶ ಇಲ್ಲದಿರುವುದರಿಂದ, ಸದರಿಯವರನ್ನು ಹೊರತುಪಡಿಸಿ, ಉಳಿದ ಇಬ್ಬರು ಅಧಿಕಾರಿ/ನೌಕರರ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ನಿರ್ಧರಿಸಿ, ಸರ್ಕಾರವು ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆಯನ್ನು ಜರುಗಿಸಲು ಮೇಲೆ ಓದಲಾದ(2)ರಲ್ಲಿ ದೋಷಾರೋಪಣೆ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟಿಸ್ ಜಾರಿ ಮಾಡಲಾಗಿತ್ತು.

1) **ಶ್ರೀ ಸಿ.ಆರ.ನರೇಂದ್ರ, ಅಂದಿನ ಸ.ಕಾ.ಇಂ., ಪಂ.ರಾ.ಇಂ.ಉಪವಿಭಾಗ ಬೆಳ್ತಂಗಡಿ**

2) **ಶ್ರೀ ಕೆ.ಎಸ್.ತಿಪ್ಪೇಸ್ವಾಮಿ, ಸಹಾಯಕ ಇಂಜಿನಿಯರ್-2, ಪಂ.ರಾ.ಇಂ.ಉಪವಿಭಾಗ ಬೆಳ್ತಂಗಡಿ**

ದೋಷಾರೋಪಣೆ ಪಟ್ಟಿಯೊಂದಿಗೆ ಜಾರಿ ಮಾಡಲಾಗಿದ್ದ ಕಾರಣ ಕೇಳುವ ನೋಟಿಸ್‌ಗೆ ಮೇಲ್ಕಂಡ ಅಧಿಕಾರಿ/ನೌಕರರು ಮೇಲೆ ಓದಲಾದ (3)ರಲ್ಲಿ ಅವರುಗಳು ಲಿಖಿತ ಹೇಳಿಕೆ ಸಲ್ಲಿಸಿ, ಅವರ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈ ಬಿಡುವಂತೆ ಕೋರಿರುತ್ತಾರೆ.

ಶ್ರೀ ಕೆ.ಎಸ್.ತಪ್ಪೇಸಾಮಿ ರವರು ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಪರಿಶೀಲಿಸಿದೆ. ಕಪಿಲಾ ನದಿಗೆ ಅಡ್ಡಲಾಗಿ ಸೇತುವೆ ಹಾಗೂ ಕಿಂಡಿ ಆಣೆಕಟ್ಟೆಗೆ ಹಲಗೆ ಒದಗಿಸಲು ಅನುದಾನದ ಕೊರತೆ ಇರುವುದರಿಂದ ಹಲಗೆಗಳನ್ನು ಅಳವಡಿಸಿರುವುದಿಲ್ಲವೆಂದು, ಸದರಿ ಪ್ರದೇಶದಲ್ಲಿ ಲಭ್ಯವಿರುವ ಸಾಮಗ್ರಿಗಳನ್ನು ಉಪಯೋಗಿಸಿಕೊಂಡು ಕವಲು ಹೊಳೆಯ ನೀರು ನಿಲ್ಲಿಸಲು ಕಲ್ಪಿಸಲಾಗಿದೆಯೆಂದು, ಈಗಲೂ ಸಹ ಹಲಗೆಗಳನ್ನು ಅಳವಡಿಸದೆ ನೀರನ್ನು ನಿರಂತರವಾಗಿ ನಿಲ್ಲಿಸಬಹುದಾಗಿದೆಂದು, ಸದರಿ ಕಾಮಗಾರಿಯನ್ನು ಅಂದಾಜು ಪಟ್ಟಿಯಂತೆ ನಿರ್ವಹಿಸಿದ್ದು, ಇದರಲ್ಲಿ ಯಾವುದೇ ಆರ್ಥಿಕನಷ್ಟ ಉಂಟಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ. ಇನ್ನೊಬ್ಬ ಆಪಾದಿತರಾದ ಶ್ರೀ ಸಿ.ಆರ್.ನರೇಂದ್ರ, ಅಂದಿನ ಸ.ಕಾ.ಇಂ. ರವರು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಶಿಶಿಲ ಗ್ರಾಮ ಪಂಚಾಯತ್ ವ್ಯಾಪ್ತಿಯ ಜನವಸತಿ ಪ್ರದೇಶಗಳಾದ ಕೋಳಕೆಬ್ಬೈಲ್ ಪರಿಶಿಷ್ಟ ಕಾಲೋನಿ, ಗುಡ್ಡೆ ತೋಟ ಪರಿಶಿಷ್ಟರ್ ಪಂಗಡ ಕಾಲೋನಿ, ಬಟ್ಲ, ವಟ್ಲ, ಕೋಟೆಬಾಗಲು ಹಾಗೂ ಹೊಸಕಟ್ಟೆ ಪ್ರದೇಶದಲ್ಲಿ ಸುಮಾರು 120 ಕುಟುಂಬಗಳಿಗೆ ಹಾಗೂ ಶಿಶಿಲೇಶ್ವರ ದೇವಸ್ಥಾನಕ್ಕೆ ಆಗಮಿಸುವ ಭಕ್ತಾಧಿಗಳಿಗೆ ರಸ್ತೆ ಸಂಪರ್ಕ ಇಲ್ಲದೆ ಇರುವುದರಿಂದ ನದಿ ದಾಟಲು ದೋಣಿ ಮತ್ತು ತೆಪ್ಪಗಳನ್ನು ಅವಲಂಭಿಸಬೇಕಾಗಿರುವುದರಿಂದ, ಸದರಿಯವರುಗಳಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಕಪಿಲಾ ನದಿಗೆ ಸೇತುವೆ ಹಾಗೂ ಕಿಂಡಿ ಆಣೆಕಟ್ಟೆಯನ್ನು ನಿರ್ಮಿಸಲಾಗಿರುತ್ತದೆಂದು ತಿಳಿಸಿರುತ್ತಾರೆ.

2012-13ನೇ ಸಾಲಿನ NRDWP ಯೋಜನೆಯ (Sustainability) ಕಾರ್ಯಕ್ರಮದಡಿ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಶಿಶಿಲ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಪಿಲಾ ನದಿಗೆ ಅಡ್ಡಲಾಗಿ ಸೇತುವೆ ಹಾಗೂ ಕಿಂಡಿ ಆಣೆಕಟ್ಟೆ ನಿರ್ಮಾಣ ಕಾಮಗಾರಿಯಲ್ಲಿ ಹಲಗೆಗಳನ್ನು ಅಳವಡಿಸಲು ಕೇವಲ ರೂ.94,000/-ಗಳ ಅವಶ್ಯಕತೆಯಿದ್ದು, ಸದರಿ ಅನುದಾನವನ್ನು ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ನಿರ್ವಹಿಸಬಹುದಾಗಿತ್ತು. ಆದರೆ ಆಪಾದಿತರುಗಳು ಈ ಅಂಶವನ್ನು ಅಳವಡಿಸದೇ ಇರುವುದರಿಂದ, ಸದರಿ ಕಿಂಡಿ ಆಣೆಕಟ್ಟಿನಲ್ಲಿ ನೀರು ಶೇಖರಣೆಯಾಗದೇ, ಕೇವಲ ಸೇತುವೆಯಾಗಿ ಬಳಕೆಯಾಗುತ್ತಿದ್ದು, ಇದರಿಂದ ಯೋಜನೆಯ ಉದ್ದೇಶವು ವಿಫಲವಾಗಿರುತ್ತದೆ. ಹಾಗಾಗಿ ಸದರಿಯವರುಗಳ ವಿರುದ್ಧದ ಆರೋಪಗಳನ್ನು ಕೈ ಬಿಡಲು ಸಕಾರಣ/ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಸದರಿಯವರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 456 ಜಿಪಅ 2018 ಬೆಂಗಳೂರು ದಿನಾಂಕ:19.12.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ದಿನಾಂಕ:28.05.2019ರಂದು ಕಾರಣ ಕೇಳುವ ನೋಟಿಸಿನೊಂದಿಗೆ ಜಾರಿ ಮಾಡಲಾದ ದೋಷಾರೋಪಣೆ ಪಟ್ಟಿಯಲ್ಲಿ ಮಾಡಿರುವ ಆರೋಪಗಳ ಸಂಬಂಧ, ಸದರಿಯವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು- 1957ರ ನಿಯಮ 11ರನ್ವಯ ವಿಚಾರಣೆ ನಡೆಸಲು ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಗಳ ನಿಯಮ 11(5)(ಸಿ)ರ ಪ್ರಕಾರ ಕುಮಾರಿ ತ್ರಿಶಲಾ ಪಾಣಿಗ್ರಹಣಿ, ತಾಂತ್ರಿಕ ಸಹಾಯಕರು , ಮುಖ್ಯ ಇಂಜಿನಿಯರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕೇಂದ್ರ ಕಚೇರಿ, ಬೆಂಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

**1) ಶ್ರೀ ಸಿ.ಆರ.ನರೇಂದ್ರ, ಅಂದಿನ ಸ.ಕಾ.ಇಂ., ಪಂ.ರಾ.ಇಂ.ಉಪವಿಭಾಗ ಬೆಳ್ತಂಗಡಿ**

**2) ಶ್ರೀ ಕೆ.ಎಸ್.ತಿಪ್ಪೇಸ್ವಾಮಿ, ಸಹಾಯಕ ಇಂಜಿನಿಯರ್-2, ಪಂ.ರಾ.ಇಂ.ಉಪಿಭಾಗ ಬೆಳ್ತಂಗಡಿ**

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗದಿಪಡಿಸಿರುವ ಕಾರ್ಯವಿಧಾನ ಅನುಸರಿಸಿ ವಿಚಾರಣೆ ಜರುಗಿಸಿ ವಿಚಾರಣೆ ವರದಿಯನ್ನು ಅವಶ್ಯಕ ದಾಖಲಾತಿಗಳೊಂದಿಗೆ ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಇಲಾಖಾ ವಿಚಾರಣೆಗೆ ಅವಶ್ಯವಿರುವ ಸ್ಥಳಾವಕಾಶ, ಲೇಖನ ಸಾಮಗ್ರಿ ಹಾಗೂ ಸಿಬ್ಬಂದಿ ವ್ಯವಸ್ಥೆಯನ್ನು ಕಲ್ಪಿಸುವಂತೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/12/2019

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

19/12

ಇವರಿಗೆ

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದ ರಾವ್, ವೃತ್ತ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದ), ಕೆ.ಆರ್.ಸರ್ಕಲ್, ಬೆಂಗಳೂರು
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ
7. ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ ಜಿಲ್ಲಾ ನ್ಯಾಯಾಧೀಶರು, , ನಂ.245, 8ನೇ ಮೇನ್ ಜುಡಿಷಿಯಲ್ ಲೇಔಟ್, ಶಿವನಗರ ತಲಘಟ್ಟಪುರ, ಬೆಂಗಳೂರು, ಮೋ.9739370777
8. ಕುಮಾರಿ ತ್ರಿಶಲಾ ಪಾಣಿಗ್ರಹಣಿ, ತಾಂತ್ರಿಕ ಸಹಾಯಕರು , ಮುಖ್ಯ ಇಂಜಿನಿಯರ, ಗ್ರಾಮೀಣ ಕುಡಿಯು ನೀರು ಮತ್ತು ನೈರ್ಮಲ್ಯ ಇಲಾಖೆ ಕೇಂದ್ರ ಕಚೇರಿ ಬೆಂಗಳೂರು
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, (ಸೇವೆಗಳು-ಎ&ಸಿ) ವಿಕಾಸಸೌಧ ಬೆಂಗಳೂರು.
10. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾ ರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
13. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.